# ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹಗರಿಬೊಮ್ಮನಹಳ್ಳಿ

ಸಿ ಸಿ ನಂ. 424/2022

ಸಾಕ್ಷಿಗೆ ದಿನಾಂಕ 13-02-2026 ರಂದು ಪ್ರಮಾಣ ವಚನ ಭೋದಿಸಲಾಯಿತು.

C.W.: 7 P.W.: 8

| | | |
|---|---|---|
| ಹೆಸರು | : | ಹೆಚ್ ನಾಗರಾಜ್ |
| ತಂದೆಯ ಹೆಸರು | : | ಬಸಪ್ಪ |
| ವಯಸ್ಸು | : | 48 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ ಸ್ಥಳ | : | ಏಣಗಿ ಬಸಾಪುರ ಗ್ರಾಮ |

ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ಆರೋಪಿತರು ಮತ್ತು ಚಾಸಾ-1 ರವರು ಸಂಬಂಧಿಕರು. ಚಾಸಾ-1 ರವರು ನನ್ನ ತಂಗಿಯ ಗಂಡ. ಚಾಸಾ-4 ನನ್ನ ತಂಗಿ. ಚಾಸಾ-5 ನನ್ನ ಸಂಬಂಧಿಕರು.

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ, ಚಾಸಾ-1 ರವರು ಯಾರ ವಿರುದ್ಧ ದೂರು ನೀಡಿರುತ್ತಾರೆಂದು ನನಗೆ ಗೊತ್ತಿಲ್ಲ ನಾನು ಯಾವುದೇ ದೂರು ಬರೆದಿಲ್ಲ. ಸಾಕ್ಷಿಗೆ ನಿಪಿ-1 ರ ದೂರು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ತನ್ನ ಸಹಿ ಇದೆ ಅಂತಾ ನೋಡಿ ಗುರುತಿಸಿದ್ದು ಅದನ್ನು ನಿಪಿ-1ಬಿ ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಏನು ಬರೆದಿರುತ್ತಾರೆಂದು ನನಗೆ ಗೊತ್ತಿಲ್ಲ. ಸದರಿ ದಾಖಲೆಗೆ ನಾನು ಪೋಲೀಸರ ಕೋರಿಕೆ ಮೇರೆಗೆ ಈಗ 3 ವರ್ಷದ ಹಿಂದೆ ಪೋಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಾನು ಪೋಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-

ಆರೋಪಿತರು ಮತ್ತು ಚಾಸಾ-1 ರವರ ನಡುವೆ ಆಸ್ತಿ ವಿಚಾರಕ್ಕಾಗಿ ದಿಃ 31-03-2022 ರಂದು ಗಲಾಟೆಯಾಗಿರುತ್ತದೆ ಆ ಬಗ್ಗೆ ದಿಃ 02-04-2022 ರಂದು ದೂರು ನೀಡಲು ಚಾಸಾ-1 ರವರು ಬಂದು ದೂರನ್ನು ನನ್ನ ಹೇಳಿಕೆಯಂತೆ ಬರೆದುಕೊಡು ಅಂತಾ ನನಗೆ ಕೋರಿಕೊಂಡಿದ್ದರಿಂದ ನಾನು ಚಾಸಾ-1 ರವರ ಹೇಳಿಕೆಯಂತೆ ನಿಪಿ-1 ರಂತೆ ದೂರನ್ನು ಬರೆದು ಸದರಿ ದಾಖಲೆಗೆ ನಿಪಿ-1ಬಿ ರಂತೆ ನನ್ನ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಆ ಬಗ್ಗೆ ನಾನು

ದಿಃ03-04-2022 ರಂದು ಪೋಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸದರಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-10 ಎಂದು ಗುರುತಿಸಲಾಯಿತು. ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು. ಆರೋಪಿ ಪರ ವಕೀಲರಿಂದಃ- ಇಲ್ಲ

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ